ಅ) ಹಳದಿ ಎಎವೈ ಒಟ್ಟು
205134 14692 219726

ಒಟ್ಟು 2,19,726 ಕುಟುಂಬಗಳಿಗೆ ಹಳದಿ ಪಡಿತರ ಚೀಟಿ ನೀಡಲಾಗಿರುತ್ತದೆ.

ಆ) ಈ ಬಗ್ಗೆ ದೂರು ಬಂದಿದೆ. ಅನರ್ಹರನ್ನು ಪತ್ತೆ ಹಚ್ಚಿ, ಅಂತಹ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗುತ್ತಿದೆ.

ಇ) ಬೆಂಗಳೂರು ಅನೌಪಚಾರಿಕ ಪಡಿತರ ಪ್ರದೇಶದಲ್ಲಿ ಘೋಷಿತ ಹಾಗೂ ಅಘೋಷಿತ ಕೊಳಚೆ ಪ್ರದೇಶಗಳಲ್ಲಿ ಸಮೀಕ್ಷೆ ನಡೆಸಿ ಅರ್ಹ ಬಡತನ ರೇಖೆಗಿಂದ ಕೆಳಗಿನ ಕುಟುಂಬಗಳಿಗೆ ಹಳದಿ ಪಡಿತರ ಚೀಟಿಗಳನ್ನು ನೀಡಲಾಗಿತ್ತು. ನಂತರ ಕೊಳಚೆ ಪ್ರದೇಶದ ಹೊರಗಿನ ಬಡತನ ರೇಖೆಗಿಂತ ಕೆಳಗಿನ ಅರ್ಹ ಕುಟುಂಬಗಳನ್ನು ಸಹ ಗುರುತಿಸಿ ಹಳದಿ ಪಡಿತರ ಚೀಟಿ ನೀಡಲಾಗಿರುತ್ತದೆ.

ಈ) ಮನೆ–ಮನೆ ಪುನರ್ ಸಮೀಕ್ಷೆ ಕಾರ್ಯವನ್ನು ಜನವರಿ 2005ರಿಂದ ಏಪ್ರಿಲ್ 2005ರವರೆಗೆ ಕೈಗೊಂಡಿದ್ದು, ಸಮೀಕ್ಷೆ ಮುಕ್ತಾಯವಾದ ನಂತರ ಎಲ್ಲಾ ಅರ್ಹ ಫಲಾನುಭವಿಗಳಿಗೆ ಪಡಿತರ ಚೀಟಿ ವಿತರಿಸಲಾಗುವುದು.

631(1070) ಶ್ರೀ ವಿ. ಸೋಮಣ್ಣ (ಬಿನ್ನಿಪೇಟೆ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರಿನ ಲಾಲ್‌ಬಾಗ್ ಉದ್ಯಾನವನದ ಪಶ್ಚಿಮ ದ್ವಾರದ ಬಳಿ ಹಾಪ್‌ಕಾಮ್ಸ್ ಮಳಿಗೆ ಪ್ರಾರಂಭಿಸಲು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಆರ್.ವಿ. ದೇಶಪಾಂಡೆ (ಸಹಕಾರ ಸಚಿವರು)

ಅ) ಇಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

632(1071) ಶ್ರೀ ಸೋಮಣ್ಣ ವಿ. (ಬಿನ್ನಿಪೇಟೆ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೋಲಾರದಲ್ಲಿ ತೋಟಗಾರಿಕೆ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿದೆಯೇ;

ಆ) ಹಾಗಿದ್ದಲ್ಲಿ ಇದಕ್ಕಾಗಿ ಕೈಗೊಂಡ ಪೂರ್ವ ಸಿದ್ಧತೆ ಕಾರ್ಯಕ್ರಮಗಳೇನು;

ಇ) ಈ ಉದ್ದೇಶಿತ ವಿಶ್ವವಿದ್ಯಾಲಯದ ಕಾರ್ಯ ವ್ಯಾಪ್ತಿ ಏನು;

ಈ) ಇದರಿಂದ ಆಗತಕ್ಕ ಪ್ರಯೋಜನಗಳೇನು?